# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 02.07.2024ರಂದು ಅಪರಾಹ್ನ 2.30 ಗಂಟೆಗೆ ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ಸ್ನಾತಕೋತ್ತರ ವಿಭಾಗಗಳ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ಸಮಾಲೋಚನಾ ಸಭೆಯ ನಡಾವಳಿಗಳು

ಪರಿಶಿಷ್ಟ ಜಾತಿ/ಪಂಗಡದ ವಿಶೇಷಾಧಿಕಾರಿಯವರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನೂ ಸ್ವಾಗತಿಸಿದರು.

ವಿದ್ಯಾರ್ಥಿಗಳ ಅಹವಾಲುಗಳನ್ನು ಅಧ್ಯಕ್ಷತೆ ವಹಿಸಿದ್ದ ಮಾನ್ಯ ಕುಲಪತಿಯವರ ಗಮನಕ್ಕೆ ತರಲಾಯಿತು.

1. ಸರ್ಕಾರದ ಆದೇಶದಂತೆ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮೆಯಾದ ಮೊತ್ತವನ್ನು ಕಡ್ಡಾಯವಾಗಿ ವಿಶ್ವವಿದ್ಯಾನಿಲಯಕ್ಕೆ ಪಾವತಿಸುವ ಬಗ್ಗೆ ಹಾಗೂ ಪ್ರವೇಶಾತಿ ಶುಲ್ಕ ಪಾವತಿಸುವ ಬಗ್ಗೆ ಇರುವ ಗೊಂದಲಗಳ ಬಗ್ಗೆ ವಿದ್ಯಾರ್ಥಿಗಳ ಮನವಿ.

ಉನ್ನತ ಶಿಕ್ಷಣ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹೊರಡಿಸಿರುವ ಆದೇಶದ ಮೇರೆಗೆ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ವಿಶ್ವವಿದ್ಯಾನಿಲಯವು ಸರ್ಕಾರದ ನಿಯಮಾನುಸಾರವಾಗಿ ಕಾರ್ಯ ನಿರ್ವಹಿಸಬೇಕಾಗಿದ್ದು, 2022-23ನೇ ಸಾಲಿನ ಲೆಕ್ಕ ಪರಿಶೋಧನಾ ಆಕ್ಷೇಪಣೆಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಂದ ಶುಲ್ಕವನ್ನು ವಸೂಲಾತಿ ಮಾಡದಿರುವ ಬಗ್ಗೆ ಆಕ್ಷೇಪಣೆ ಇರುವುದರಿಂದ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಅವರ ಖಾತೆಗೆ ಜಮೆಯಾಗುವ ಮೊತ್ತವನ್ನು ಕಡ್ಡಾಯವಾಗಿ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು. ಪ್ರವೇಶಾತಿ ಶುಲ್ಕ ಹಾಗೂ ಇತರ ಶುಲ್ಕ ಪಾವತಿಸುವ ಬಗ್ಗೆ ಶೈಕ್ಷಣಿಕ ವರ್ಷ ಪ್ರಾರಂಭವಾಗುವ ಮೊದಲೇ ಸುತ್ತೋಲೆಯನ್ನು ಕಳುಹಿಸಲಾಗುವುದೆಂದು ಮಾನ್ಯ ಕುಲಪತಿಯವರು ಸೂಚಿಸಿದರು.

ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ಹೆತ್ತವರ/ಪೋಷಕರ ವಾರ್ಷಿಕ ಆದಾಯದ ಮಿತಿ ರೂಪಾಯಿ ಎರಡು ಲಕ್ಷದ ಐವತ್ತು ಸಾವಿರ ಮತ್ತು ಅದಕ್ಕಿಂತ ಮೇಲ್ಪಟ್ಟಲ್ಲಿ ಸರ್ಕಾರದ ಆದೇಶದಂತೆ ವಿದ್ಯಾರ್ಥಿವೇತನಕ್ಕೆ ಅವಕಾಶ ಇರುವುದಿಲ್ಲ, ಹಾಗೂ ಅಂತಹ ವಿದ್ಯಾರ್ಥಿಗಳು ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಬೇಕಾಗುತ್ತದೆ

2. ಪಾವತಿ ವರ್ಗದಡಿಯಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಪೂರ್ಣ ಪ್ರವೇಶಾತಿ ಶುಲ್ಕ ಪಾವತಿಸುವ ಬಗ್ಗೆ.

ಪಾವತಿ ವರ್ಗದಡಿಯಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಪೂರ್ಣ ಪ್ರವೇಶಾತಿ ಶುಲ್ಕ ಮತ್ತು ಉಳಿಕೆ ಶುಲ್ಕ (Balance Fee) ಸೇರಿದಂತೆ ಉಳಿದ ಶುಲ್ಕವನ್ನು ಪಾವತಿಸ ಬೇಕಾಗುತ್ತದೆ.

3. ಹಾಸ್ಟೆಲ್‌ನಲ್ಲಿ ವಾಸ್ತವ್ಯವಿರುವ ವಿದ್ಯಾರ್ಥಿಗಳ ನಿರ್ವಹಣಾ ವೆಚ್ಚದ ಬಗ್ಗೆ.

ಹಾಸ್ಟೆಲ್‌ನಲ್ಲಿ ವಾಸ್ತವ್ಯವಿರುವ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ತಮ್ಮ ಖಾತೆಗೆ ಜಮೆಯಾದ ನಿರ್ವಹಣಾ ವೆಚ್ಚ ರೂ. 6,000.00ನ್ನು ಹಾಸ್ಟೆಲ್ ಬ್ಯಾಂಕ್ ಖಾತೆಗೆ ಕಡ್ಡಾಯವಾಗಿ ಪಾವತಿಸಬೇಕಾಗುತ್ತದೆ. .

4 ಸ್ನಾತಕೋತ್ತರ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ / ಪಂಗಡದ ಕೆಲವು ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ವಿದ್ಯಾರ್ಥಿಗಳಿಗೆ ಸರಿಯಾಗಿ ಪಾವತಿಯಾಗದಿರುವ ಬಗ್ಗೆ.

ಈ ಬಗ್ಗೆ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ SSP Portalನಲ್ಲಿ online ಮೂಲಕ ಅರ್ಜಿ ಸಲ್ಲಿಸುವಾಗ ಆದಾಯ ಮತ್ತು ಜಾತಿ ಸರ್ಟಿಫಿಕೇಟ್ ಸರಿಯಾಗಿ ಇಲ್ಲದಿದ್ದ ಪಕ್ಷದಲ್ಲಿ ಅರ್ಜಿಯು ನಿರಾಕರಿಸಲ್ಪಡುತ್ತದೆ. ಇದಕ್ಕೆ ವಿಶ್ವವಿದ್ಯಾನಿಲಯವು ಕಾರಣವಾಗುವುದಿಲ್ಲ ಎಂದು ತಿಳಿಸಲಾಯಿತು. ಈ ಬಗ್ಗೆ ಸಂಬಂದಪಟ್ಟ ವಿದ್ಯಾರ್ಥಿಗಳು ಸರಿಯಾದ ಮಾಹಿತಿಯನ್ನು SSP Portal ನಲ್ಲಿ ದಾಖಲಿಸ ಬೇಕು.

5. ಕಳೆದ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ / ಪಂಗಡದ ವಿದ್ಯಾರ್ಥಿಗಳ ಬೇಬಾಕಿ ಪತ್ರ ಹಾಗೂ ಅಂಕ ಪಟ್ಟಿಗಳು ನೀಡದಿರುವ ಬಗ್ಗೆ.

ವಿಶ್ವವಿದ್ಯಾನಿಲಯಕ್ಕೆ ಶುಲ್ಕವನ್ನು ಮರುಭರಣೆ ಮಾಡದಿರುವ ಸಂದರ್ಭದಲ್ಲಿ ಸದರಿ ಕ್ರಮವನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಲಾಯಿತು.

6.. ಕಳೆದ ಶೈಕ್ಷಣಿಕ ವರ್ಷದಲ್ಲಿ ಪರಿಶಿಷ್ಟಜಾತಿ/ಪಂಗಡದ ವಿದ್ಯಾರ್ಥಿಗಳ ಕುಂದುಕೊರತೆ ಸಭೆ ನಡೆಯದಿರುವ ಬಗ್ಗೆ ವಿದ್ಯಾರ್ತಿಗಳ ಆಕ್ಷೇಪಣೆ.

ಈ ಬಗ್ಗೆ ಇನ್ನು ಮುಂದಕ್ಕೆ ಕುಂದು ಕೊರತೆ ಸಭೆಯ ಬದಲಿಗೆ ಸಮಾಲೋಚನೆ ಸಭೆಯನ್ನು ನಡೆಸಲು ನಿರ್ಧರಿಸಲಾಗಿದೆ ಎಂಬುದನ್ನು ಕುಲಪತಿಯವರು ತಿಳಿಸಿದರು.

7. ಕಳೆದ ಶೈಕ್ಷಣಿಕ ವರ್ಷದಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸದಿರುವ ಬಗ್ಗೆ ಹಾಗೂ ಸರ್ಕಾರದ ಆಯವ್ಯಯದಲ್ಲಿ 18% ಮೊತ್ತವನ್ನು ಕಾಯ್ದಿರಿಸಿದ ಬಗ್ಗೆ ವಿದ್ಯಾರ್ಥಿಗಳ ಪ್ರಶ್ನೆ.

ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವುದು ಸರ್ಕಾರದ ಕಾರ್ಯಕ್ರಮ ಆಗಿರುತ್ತದೆ. ಈ ಮೊತ್ತವನ್ನು ವಿಶ್ವವಿದ್ಯಾನಿಲಯಕ್ಕೆ ಬಿಡುಗಡೆಗೊಳಿಸಬೇಕಾಗಿಲ್ಲ. ಈ ಹಿಂದೆ ವಿತರಿಸಿದ ಲ್ಯಾಪ್‌ಟಾಪ್‌ಗಳನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸಲಾಗುತ್ತಿತ್ತು. ಲ್ಯಾಪ್‌ಟಾಪ್‌ಗಳನ್ನು ವಿತರಿಸಲೇ ಬೇಕು ಎಂಬ ನಿಯಮವಿಲ್ಲ. ಸದ್ಯದ ಪರಿಸ್ಥಿತಿಯಲ್ಲಿ ಆಂತರಿಕ ಸಂಪನ್ಮೂಲದ ಕೊರತೆ ಇರುವುದರಿಂದ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಸಾಧ್ಯವಿಲ್ಲವೆಂದು ತಿಳಿಸಲಾಯಿತು. ವಿಶ್ವವಿದ್ಯಾನಿಲಯದ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿಗಾಗಿ ವಿಶ್ವವಿದ್ಯಾನಿಲಯ ಅನುದಾನ ಕಾಯ್ದಿರಿಸಿದ್ದು, ಅದನ್ನು ಪೂರ್ಣವಾಗಿ ಬಳಕೆ ಮಾಡಲಾಗಿದೆ ಎಂದು ತಿಳಿಸಲಾಯಿತು.

8. ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ Sports Kit ಗಾಗಿ ದೊರೆಯುವ ಮೊತ್ತದ ಬಗ್ಗೆ ವಿದ್ಯಾರ್ಥಿಗಳ ಪ್ರಶ್ನೆ.

ವಿಶ್ವವಿದ್ಯಾನಿಲಯವು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವುದರಿಂದ ಆಂತರಿಕ ಸಂಪನ್ಮೂಲದಿಂದ ಮೊತ್ತವನ್ನು ನೀಡಲು ಸಾಧ್ಯವಿಲ್ಲವೆಂದು ತಿಳಿಸಲಾಯಿತು.

9. ರಾಷ್ಟ್ರೀಯ ಮಟ್ಟದಲ್ಲಿ ಆಟ ಆಡಿದ ಪರಿಶಿಷ್ಟ ಜಾತಿ/ಪಂಗಡದ ಕ್ರೀಡಾ ವಿದ್ಯಾರ್ಥಿಗಳಿಗೆ ದೊರೆಯುವ ಶಿಷ್ಯ ವೇತನದ ಬಗ್ಗೆ ಪ್ರಶ್ನೆ.

ರಾಷ್ಟ್ರೀಯ ಮಟ್ಟದಲ್ಲಿ ಆಟ ಆಡಿದ ಪರಿಶಿಷ್ಟ ಜಾತಿ/ಪಂಗಡದ ಕ್ರೀಡಾ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕು ಎಂದು ಸೂಚಿಸಲಾಯಿತು.

10. ವಸತಿನಿಲಯದಲ್ಲಿ ಮಾಂಸಾಹಾರ ಒದಗಿಸುವ ಬಗ್ಗೆ ಮನವಿ.

40 ವರ್ಷಗಳಿಂದ ನಡೆದುಕೊಂಡು ಬರುವ ವ್ಯವಸ್ಥೆಯನ್ನು ಬದಲಾಯಿಸಲು ಸಾಧ್ಯವಿಲ್ಲ. ಪ್ರತ್ಯೇಕ ವಸತಿನಿಲಯದ ವ್ಯವಸ್ಥೆ ಆದ ನಂತರ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದ ಎಂದು ತಿಳಿಸಲಾಯಿತು.

11. ಶೈಕ್ಷಣಿಕ ವರ್ಷದ ರಜಾ ಸಮಯದಲ್ಲಿ ವಸತಿ ನಿಲಯದಲ್ಲಿ ವಾಸ್ತವ್ಯವಿದ್ದ ವಿದ್ಯಾರ್ಥಿಗಳಿಂದ ಮೊತ್ತವನ್ನು ಪಡೆದಿರುವ ಬಗ್ಗೆ ಪ್ರಶ್ನೆ.

ಈ ಬಗ್ಗೆ ವಸತಿನಿಲಯದಲ್ಲಿ ಅಧ್ಯಾಪಕ ಸಲಹೆಗಾರರಲ್ಲಿ ಮಾಹಿತಿಯನ್ನು ಪಡೆದು ಪರಿಶೀಲಿಸಲಾಗುವುದೆಂದು ತಿಳಿಸಲಾಯಿತು.

12. ಪ್ರವಾಸಕ್ಕೆ ತೆರಳುವ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ ಪಾವತಿಸುವ ಮೊತ್ತದ ಬಗ್ಗೆ.

ಪ್ರವಾಸಕ್ಕೆ ತೆರಳುವ ವಿದ್ಯಾರ್ಥಿಗಳಿಗೆ ಆಂತರಿಕ ಸಂಪನ್ಮೂಲದಿಂದ ಮೊತ್ತವನ್ನು ಈಗಾಗಲೇ ಪಾವತಿಸಲಾಗುತ್ತದೆ.

ಕೊನೆಯದಾಗಿ ಎಲ್ಲರಿಗೂ ಧನ್ಯವಾದಗಳನ್ನು ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕುಲಸಚಿವರು

ವಿಶೇಷಾಧಿಕಾರಿಗಳು

ಕುಲಪತಿಗಳು

# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 08.07.2024ರಂದು ಪೂರ್ವಾಹ್ನ 10.30 ಗಂಟೆಗೆ ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಪಿಹೆಚ್.ಡಿ ಸಂಶೋಧನಾ ವಿದ್ಯಾರ್ಥಿಗಳ ಸಮಾಲೋಚನಾ ಸಭೆಯ ನಡಾವಳಿಗಳು

ಪರಿಶಿಷ್ಟ ಜಾತಿ/ಪಂಗಡದ ವಿಶೇಷಾಧಿಕಾರಿಯವರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನೂ ಸ್ವಾಗತಿಸಿದರು.

ಸಂಶೋಧನಾ ವಿದ್ಯಾರ್ಥಿಗಳ ಅಹವಾಲುಗಳನ್ನು ಅಧ್ಯಕ್ಷತೆ ವಹಿಸಿದ್ದ ಮಾನ್ಯ ಕುಲಪತಿಯವರ ಗಮನಕ್ಕೆ ತರಲಾಯಿತು ಈ ಸಂಬಂಧ ಈ ಕೆಳಗಿನ ತೀರ್ಮಾನಗಳನ್ನು ತೆಗೆದುಕೊಳ್ಳಲಾಯಿತು.

1. ಇನ್ನು ಮುಂದೆ ಕುಂದು ಕೊರತೆ ಸಭೆಯ ಬದಲಿಗೆ ಸಮಾಲೋಚನೆ ಸಭೆಯನ್ನು ನಡೆಸಲು ನಿರ್ಧರಿಸಲಾಗಿದೆ ಎಂಬುದನ್ನು ತಿಳಿಸಲಾಯಿತು.

2. ಪರಿಶಿಷ್ಟ ಜಾತಿ/ಪಂಗಡದ ಸಮಾಲೋಚನಾ ಸಭೆಯ ನಡಾವಳಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಲಾಗುವುದು ಎಂದು ತಿಳಿಸಲಾಯಿತು.

3. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳ ಶಿಷ್ಯವೇತನವನ್ನು ವಿಳಂಬವಾಗಿ ನೀಡುತ್ತಿರುವ ಬಗ್ಗೆ ಮನವಿ.

   ಸಂಶೋಧನಾ ವಿದ್ಯಾರ್ಥಿಗಳು ಆರು ತಿಂಗಳಿಗೊಮ್ಮೆ ಸಂಶೋಧನಾ ಕಾರ್ಯದ ಪ್ರಗತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪ್ರಗತಿಯಲ್ಲಿ ಸಂಶೋಧನಾ ವಿಷಯ ಬಿಟ್ಟು ಬೇರೆ ವಿಷಯಗಳು ಇರಬಾರದೆಂದು ಸ್ಪಷ್ಟವಾಗಿ ತಿಳಿಸಲಾಯಿತು. ವರ್ಷಕ್ಕೆ ಎರಡು ಬಾರಿ ಪ್ರಗತಿಯನ್ನು ಸಲ್ಲಿಸಿದ ಬಗ್ಗೆ ದಾಖಲೆಗಳನ್ನು ಇಡಬೇಕು ಹಾಗೂ ಪ್ರಗತಿಯು ತೃಪ್ತಿಕರವಾಗಿರಬೇಕು ಎಂದು ತಿಳಿಸಲಾಯಿತು.

4 ಸಂಶೋಧನಾ ಶಿಷ್ಯ ವೇತನ, ಮರುಭರಣೆ, ಸಾದಿಲ್ವಾರು ವೆಚ್ಚ ಹಾಗೂ ಇತ್ಯಾದಿ ಸೌಲಭ್ಯಗಳ ಬಗ್ಗೆ ಸಂಶೋಧಕರಿಗೆ ಸ್ಪಷ್ಟವಾದ ಮಾರ್ಗಸೂಚಿ ನೀಡುವ ಬಗ್ಗೆ ಮನವಿ.

   ಮಾಹಿತಿಯನ್ನು ಪರಿಶಿಷ್ಟ ಜಾತಿ/ಪಂಗಡದ ಘಟಕದಿಂದ ಪಡೆದುಕೊಳ್ಳಬಹುದು. ಈ ಬಗ್ಗೆ Digital ವಿಧಾನದಲ್ಲಿ ಮಾಹಿತಿಯನ್ನು ಒದಗಿಸಲಾಗುವುದು ಎಂದು ತಿಳಿಸಲಾಯಿತು.

5. ಪರಿಶಿಷ್ಟ ಜಾತಿ/ಪಂಗಡದ ಘಟಕದ ವತಿಯಿಂದ ನೀಡಲಾಗುವ ಸಂಶೋಧನಾ ವಿದ್ಯಾರ್ಥಿಗಳ ವಾರ್ಷಿಕ ಶುಲ್ಕ ಮರುಭರಣೆ ಸೌಲಭ್ಯದ ಬಗ್ಗೆ ವಿವರಣೆ.

   ಸಂಶೋಧನಾ ವಿದ್ಯಾರ್ಥಿಗಳು ಸರಿಯಾದ ಬಿಲ್ಲುಗಳನ್ನು ಲಗತ್ತಿಸಿ, ವಾರ್ಷಿಕ ಶುಲ್ಕ ಮರುಭರಣೆಯ ಸೌಲಭ್ಯವನ್ನು ಪಡೆಯಲು ಸೂಚಿಸಲಾಯಿತು.

6.. ಪರಿಶಿಷ್ಟ ಜಾತಿ/ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಸರಕಾರದ ಯೋಜನೆಗಳಲ್ಲೊಂದಾಗಿರುವ ಲ್ಯಾಪ್‌ಟಾಪ್ ಸೌಲಭ್ಯವನ್ನು ಒದಗಿಸುವ ಬಗ್ಗೆ ವಿವರಣೆ.

   ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವುದು ಸರ್ಕಾರದ ಕಾರ್ಯಕ್ರಮ ಆಗಿರುತ್ತದೆ. ಈ ಮೊತ್ತವನ್ನು ವಿಶ್ವವಿದ್ಯಾನಿಲಯಕ್ಕೆ ಬಿಡುಗಡೆಗೊಳಿಸಬೇಕಾಗಿಲ್ಲ. ಈ ಹಿಂದೆ ವಿತರಿಸಿದ ಲ್ಯಾಪ್‌ಟಾಪ್‌ಗಳನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸಲಾಗುತ್ತಿತ್ತು. ಲ್ಯಾಪ್‌ಟಾಪ್‌ಗಳನ್ನು ವಿತರಿಸಲೇ ಬೇಕು ಎಂಬ ನಿಯಮವಿಲ್ಲ. ಸದ್ಯದ ಪರಿಸ್ಥಿತಿಯಲ್ಲಿ ಆಂತರಿಕ ಸಂಪನ್ಮೂಲದ ಕೊರತೆ ಇರುವುದರಿಂದ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಸಾಧ್ಯವಿಲ್ಲವೆಂದು ತಿಳಿಸಲಾಯಿತು. ವಿಶ್ವವಿದ್ಯಾನಿಲಯದ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿಗಾಗಿ ವಿಶ್ವವಿದ್ಯಾನಿಲಯ ಅನುದಾನ ಕಾಯ್ದಿರಿಸಿದ್ದು ಅದನ್ನು ಪೂರ್ಣವಾಗಿ ಬಳಕೆ ಮಾಡಲಾಗಿದೆ ಎಂದು ತಿಳಿಸಲಾಯಿತು

7. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಕಲ್ಯಾಣ ನಿಧಿ (SCP/TSP ಹಣ)ವನ್ನು ಸಾಮಾನ್ಯ ಕಾರ್ಯಗಳಿಗೆ ಬಳಸದೇ SC/ST ವಿದ್ಯಾರ್ಥಿ ಹಾಗೂ ಸಂಶೋಧನಾ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಬಳಕೆಯಾಗುವ ಬಗ್ಗೆ.

   2022-23 ಮತ್ತು 2023-24ನೇ ಶೈಕ್ಷಣಿಕ ವರ್ಷದಲ್ಲಿ ಪ್ರತಿ ಸಂಶೋಧನಾ ವಿದ್ಯಾರ್ಥಿಗಳಿಗೆ ರೂ.10,000.00 ದಂತೆ ಪಾವತಿಸಲು ಸರ್ಕಾರದಿಂದ ಅನುದಾನ ಮಂಜೂರಾಗಿರುತ್ತದೆ. ವಿಶ್ವವಿದ್ಯಾನಿಲಯವು ಪ್ರತೀ ವಿದ್ಯಾರ್ಥಿಗೆ ಎರಡು ವರ್ಷ ತನಕ ರೂ. 25,000.00 ದಂತೆ ಮೂರನೆಯ ವರ್ಷದಿಂದ ರೂ.30,000.00 ದಂತೆ ಪಾವತಿಸುತ್ತಿದ್ದು ಹೆಚ್ಚುವರಿ ಮೊತ್ತವನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸಲಾಗುತ್ತಿದೆ. ಇದರ ಹೊರತಾಗಿ HRA ಪಾವತಿಸಲು ಅವಕಾಶವಿರುವುದಿಲ್ಲ. ಹಾಗೂ ವಿಶ್ವವಿದ್ಯಾನಿಲಯದಲ್ಲಿ ಸಂಪನ್ಮೂಲವು ಇಲ್ಲದಿರುವ ಅಂಶವನ್ನುತಿಳಿಸಲಾಯಿತು.

8. ಪಿಹೆಚ್.ಡಿ ಸಂಶೋಧಕರಿಗೆ ಅಂತರರಾಷ್ಟ್ರೀಯ ಮತ್ತು ರಾಷ್ಟ್ರೀಯ ವಿಚಾರ ಸಂಕಿರಣಗಳಲ್ಲಿ ಪ್ರಬಂಧ ಮಂಡಣೆ ಮಾಡಲು ನಿಗದಿಪಡಿಸಲಾಗಿರುವ 'ನಿರ್ದಿಷ್ಟ ಅವಧಿ'ಯಲ್ಲಿನ ನಿಯಮ ಸಡಿಲಿಕೆ ಮಾಡುವ ಬಗ್ಗೆ.

   ಯುಜಿಸಿ ನಿಯಮಾವಳಿಯಂತೆ ಕಲಾ/ವಾಣಿಜ್ಯ/ವಿಜ್ಞಾನ ವಿದ್ಯಾರ್ಥಿಗಳ ವಿಷಯಗಳಿಗೆ ಅನುಗುಣವಾಗಿ ಅಂತರರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಐದು ವರ್ಷಗಳಿಗೊಮ್ಮೆ ಒಂದು ಸಲ ಒಬ್ಬ ವಿದ್ಯಾರ್ಥಿಗೆ ಭಾಗವಹಿಸಲು ಅವಕಾಶ ಇರುತ್ತದೆ. ಮತ್ತು ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಪ್ರತಿ ವರ್ಷ ವಿದ್ಯಾರ್ಥಿಗೆ ವಾರ್ಷಿಕ ಒಂದು ಬಾರಿಯಂತೆ, ಐದು ವರ್ಷದ ಸಂಶೋಧನಾ ಅವಧಿಯಲ್ಲಿ ಐದು ಸಲ ಭಾಗವಹಿಸುವ ಅವಕಾಶ ಕಲ್ಪಿಸಲಾಗಿರುತ್ತದೆ ಎಂದು ಸೂಚಿಸಲಾಯಿತು.

9. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ವಸತಿನಿಲಯಗಳಲ್ಲಿ ಶುಲ್ಕ ವಿನಾಯಿತಿ ನೀಡುವ ಬಗ್ಗೆ ಮನವಿ.

ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ಪಾವತಿಸುವುದರಿಂದ ವಸತಿನಿಲಯಗಳಲ್ಲಿ ಶುಲ್ಕ ವಿನಾಯಿತಿ ನೀಡಲು ಅವಕಾಶವಿರುವುದಿಲ್ಲ ಎಂದು ತಿಳಿಸಲಾಯಿತು.

10. ಎಸ್ಸಿ/ಎಸ್ಟಿ ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಸಂಶೋಧಕರಿಗೆ ಪ್ರವೇಶಾತಿಯ ಆರಂಭದಲ್ಲೇ ಶೈಕ್ಷಣಿಕ ಸೌಲಭ್ಯಗಳ ಮಾಹಿತಿ ಒದಗಿಸುವ ಬಗ್ಗೆ ಮನವಿ.

ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಲಾಯಿತು.

11. ಸಂಶೋಧನಾ ವಿದ್ಯಾರ್ಥಿಗಳ ಪ್ರವೇಶಾತಿಯ ಸಂದರ್ಭದಲ್ಲಿ ಕರ್ನಾಟಕದ ಅನ್ಯ ವಿಶ್ವವಿದ್ಯಾನಿಲಯಗಳಿಂದ ಬರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ.

ಪ್ರಾಧ್ಯಾಪಕರ ಮತ್ತು ಮಾರ್ಗದರ್ಶಕರ ಸಂಖ್ಯಾನುಸಾರ ಪ್ರವೇಶಾತಿ ನೀಡಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಲಾಯಿತು.

12. ಪಿಹೆಚ್.ಡಿ. ಪ್ರವೇಶಾತಿ ಪ್ರಕ್ರಿಯೆಯನ್ನು ನಿಗದಿತ ಅವಧಿಯಲ್ಲಿ ನಡೆಸುವಂತೆ ಹಾಗೂ ಎಸ್ಸಿ/ಎಸ್ಟಿ ಮತ್ತು ಹೈದರಾಬಾದ್ ಕರ್ನಾಟಕ ಮೀಸಲಾತಿಯನ್ನು ಪಾಲಿಸುವ ಬಗ್ಗೆ ಮನವಿ

ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಲಾಯಿತು.

13. ಪಿಹೆಚ್.ಡಿ. ಕೋರ್ಸ್ ವರ್ಕ್‌ನಲ್ಲಿರುವ pre-viva ಸೂಕ್ತ ಸಮಯದಲ್ಲಿ ನಡೆಸುವ ಬಗ್ಗೆ ಮನವಿ.

ಸಂಶೋಧನಾ ವಿದ್ಯಾರ್ಥಿಗಳು ಸೂಕ್ತ ಸಮಯದಲ್ಲಿ ಪ್ರಗತಿಯನ್ನು ಪೂರ್ಣಗೊಳಿಸಿದಾಗ pre-viva ಸೂಕ್ತ ಸಮಯದಲ್ಲಿ ನಡೆಸಲು ಸಾಧ್ಯವಾಗುವುದು ಎಂದು ಸೂಚಿಸಲಾಯಿತು.

14. ಪಿಹೆಚ್.ಡಿ. ಸಂಶೋಧಕರು PhD pre-colloquiumಗೆ ಅರ್ಜಿ ಸಲ್ಲಿಸಿದ ನಂತರ ಎಷ್ಟು ಅವಧಿ ಒಳಗೆ Doctoral Committee ಸಭೆ ನಡಸುವ ಬಗ್ಗೆ ಮನವಿ.

ಈ ಬಗ್ಗೆ ಮಾರ್ಗದರ್ಶಕರ ಮುಖಾಂತರ ಕುಲಸಚಿವರು (ಪರೀಕ್ಷಾಂಗ) ಇವರಿಗೆ ಪತ್ರ ಬರೆಯಲು ತಿಳಿಸಲಾಯಿತು.

15. ವಿಜ್ಞಾನ ವಿಭಾಗದ ಪ್ರಯೋಗಾಲಯದ ಉಪಕರಣಗಳನ್ನು ಹಾಗೂ ಗಣಕಯಂತ್ರ ಪ್ರಯೋಗಾಲಯದ ಗಣಕ ಯಂತ್ರಗಳನ್ನು ಸುಸ್ಥಿತಿಯಲ್ಲಿ ಇಡುವ ಬಗ್ಗೆ ಮನವಿ.

ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

16. ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಕೇಂದ್ರದ ಕಾರ್ಯ ಚಟುವಟಿಕೆ ಬಗ್ಗೆ ಮನವಿ.

ಡಾ.ಬಿ.ಆರ್. ಅಂಬೇಡ್ಕರ ಅಧ್ಯಯನ ಕೇಂದ್ರದ ಕಾರ್ಯಕ್ರಮದ ಮಾಹಿತಿಯನ್ನು ಒದಗಿಸಲು ಕೇಂದ್ರದ ನಿರ್ದೇಶಕರಿಗೆ ತಿಳಿಸಲಾಗುವುದು ಎಂದು ಮಾಹಿತಿ ನೀಡಲಾಯಿತು.

17. ನವೆಂಬರ್ 26ರಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ನಡೆಸುವ ಬಗ್ಗೆ ಹಾಗೂ ತಜ್ಞರಿಂದ ಸಂವಿಧಾನ ಬಗ್ಗೆ ಕಾರ್ಯಾಗಾರ/ಸಮ್ಮೇಳನ ನಡೆಸುವ ಬಗ್ಗೆ ಮನವಿ.

ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಈಗಾಗಲೇ ಆಚರಿಸಲಾಗುತ್ತಿದ್ದು, ಸಂವಿಧಾನದ ಬಗ್ಗೆ ಕಾರ್ಯಾಗಾರ/ಸಮ್ಮೇಳನ ನಡೆಸಲು ಕ್ರಮ ಕೈಗೊಳ್ಳಲಾಗುವುದು. .

18. UGCಯ Nodal Officer ರವರು ಸಂಶೋಧನಾ ವಿದ್ಯಾರ್ಥಿಗಳು ಬಿಲ್ಲುಗಳನ್ನು ಸಲ್ಲಿಸುವ ಬಗ್ಗೆ ಸೂಚನೆ.

NFST ಮತ್ತು RGNF ಅಡಿಯಲ್ಲಿ ಶಿಷ್ಯ ವೇತನ ಪಡೆಯುತ್ತಿರುವ ಸಂಶೋಧನಾ ವಿದ್ಯಾರ್ಥಿಗಳು ಪ್ರತಿ ತಿಂಗಳ 10ನೇ ದಿನಾಂಕದೊಳಗೆ ಬಿಲ್ಲುಗಳನ್ನು ತಯಾರಿಸಿ ಕುಲಸಚಿವರ ದೃಢೀಕರಣದೊಂದಿಗೆ UGCಯ Nodal Officer ಕಛೇರಿಗೆ ಸಲ್ಲಿಸಲು ಸೂಚಿಸಲಾಯಿತು.

ಕೊನೆಯದಾಗಿ ಎಲ್ಲರಿಗೂ ಧನ್ಯವಾದಗಳನ್ನು ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕುಲಸಚಿವರು

ವಿಶೇಷಾಧಿಕಾರಿಗಳು

ಕುಲಪತಿಗಳು